# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | | 433 |
| ಮಾನ್ಯ ಸದಸ್ಯರ ಹೆಸರು | | ಡಾ: ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) |
| ಉತ್ತರಿಸುವ ಸಚಿವರು | | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | | 10.03.2025 |
| **ಪ್ರಶ್ನೆ** | | **ಉತ್ತರ** |
| ಅ) | ರಾಜ್ಯದಲ್ಲಿ ಉನ್ನತ ಶಿಕ್ಷಣ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು; ಯಾವುವು; | ರಾಜ್ಯದಲ್ಲಿ ಉನ್ನತ ಶಿಕ್ಷಣ ಇಲಾಖೆಯಲ್ಲಿ ಒಟ್ಟು 32 ಸಾರ್ವಜನಿಕ ವಿಶ್ವವಿದ್ಯಾಲಯಗಳು ಕಾರ್ಯನಿರ್ವಹಿಸುತ್ತಿವೆ. ವಿವರಗಳನ್ನು ಅನುಬಂಧ-1ರಲ್ಲಿರಿಸಿದೆ. |
| ಆ) | ಪ್ರಸ್ತುತ ಎಷ್ಟು ವಿಶ್ವವಿದ್ಯಾಲಯಗಳನ್ನು (ಯಾವ ಯಾವ ವಿಶ್ವವಿದ್ಯಾಲಯಗಳು ಮುಚ್ಚಬೇಕು ಎನ್ನುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ವಿಶ್ವವಿದ್ಯಾಲಯಗಳನ್ನು ಮುಚ್ಚಲು ಗೊತ್ತುಪಡಿಸಿರುವ ಕಾರಣಗಳೇನು; | ಪ್ರಸ್ತುತ ಸರ್ಕಾರವು ರಾಜ್ಯದ ಯಾವುದೇ ವಿಶ್ವವಿದ್ಯಾಲಯಗಳನ್ನು ಮುಚ್ಚಲು ತೀರ್ಮಾನಿಸಿರುವುದಿಲ್ಲ.<br><br>ರಾಜ್ಯದಲ್ಲಿ ನೂತನವಾಗಿ ಸ್ಥಾಪಿಸಲ್ಪಟ್ಟ ವಿಶ್ವವಿದ್ಯಾಲಯಗಳನ್ನು ಒಳಗೊಂಡಂತೆ ರಾಜ್ಯದಲ್ಲಿರುವ ಎಲ್ಲಾ ವಿಶ್ವವಿದ್ಯಾಲಯಗಳ ಆರ್ಥಿಕ ಪರಿಸ್ಥಿತಿಗಳ ಬಗ್ಗೆ ಪರಾಮರ್ಶಿಸಿ ಸೂಕ್ತ ಶಿಫಾರಸ್ಸುಗಳನ್ನು ಮಾಡಲು ಸನ್ಮಾನ್ಯ ಉಪಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಉಪಸಮಿತಿಯನ್ನು ರಚಿಸಿದ್ದು, ಸದರಿ ಸಮಿತಿಯು ಈ ಬಗ್ಗೆ ಸಭೆ ನಡೆಸಿದ್ದು, ವಿಶ್ವವಿದ್ಯಾಲಯಗಳು ಎದುರಿಸುತ್ತಿರುವ ಎಲ್ಲಾ ಸಮಸ್ಯೆಗಳೊಂದಿಗೆ ರಾಜ್ಯದಲ್ಲಿನ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿ ಹಾಗೂ ಅವರ ಮುಂಬರುವ ಭವಿಷ್ಯದ ಹಿತದೃಷ್ಟಿಯನ್ನು ಗಮನದಲ್ಲಿರಿಸಿಕೊಂಡು ವಿದ್ಯಾರ್ಥಿಗಳಿಗೆ ಗುಣಾತ್ಮಕ ಶೈಕ್ಷಣಿಕ ವ್ಯವಸ್ಥೆಯನ್ನು ಕಲ್ಪಿಸುವ ನಿಟ್ಟಿನಲ್ಲಿ ನೂತನವಾಗಿ ಸ್ಥಾಪಿಸಲ್ಪಟ್ಟ ಕೆಲವು ವಿಶ್ವವಿದ್ಯಾಲಯಗಳ ಆರ್ಥಿಕ ಪರಿಸ್ಥಿತಿ, ವಿದ್ಯಾರ್ಥಿಗಳ ಪ್ರವೇಶಾತಿ, ಮೂಲಸೌಲಭ್ಯದ ಕೊರತೆ ಮುಂತಾದ ಪ್ರಮುಖ ಅಂಶಗಳ ಕುರಿತು ಮೊದಲ ಸಭೆಯಲ್ಲಿ ಚರ್ಚಿಸಲಾಗಿದ್ದು, ಸಭೆಯಲ್ಲಿ ಸ್ವೀಕೃತವಾದ ಸಲಹೆಗಳನ್ನು ಪರಾಮರ್ಶಿಸಿ ಕೆಲವು ವಿಶ್ವವಿದ್ಯಾಲಯಗಳ ವಿಲೀನ, ಹೆಚ್ಚಿನ ಅನುದಾನದ ಅಗತ್ಯತೆ ಮತ್ತು ಹಂತ-ಹಂತವಾಗಿ ಖಾಲಿ ಹುದ್ದೆಗಳ ಭರ್ತಿ ಸೇರಿದಂತೆ ವಿಶ್ವವಿದ್ಯಾಲಯಗಳ ಬಲವರ್ಧನೆಗಾಗಿ ಉನ್ನತ ಶಿಕ್ಷಣ ಇಲಾಖೆ ಮತ್ತು ಆರ್ಥಿಕ ಇಲಾಖೆಯು ಒಟ್ಟಾರೆ ಸೇರಿ ವಿಸ್ತೃತವಾದ ವರದಿ/ಪ್ರಸ್ತಾವನೆಯನ್ನು ಸಚಿವ ಸಂಪುಟಕ್ಕೆ ಮಂಡಿಸಿ ಸೂಕ್ತ ತೀರ್ಮಾನ ಕೈಗೊಳ್ಳುವ ಬಗ್ಗೆ ಪರಿಶೀಲಿಸಲಾಗುತ್ತಿದೆ. |
| ಇ) | ಈ ವಿಶ್ವವಿದ್ಯಾಲಯಗಳ ಕುರಿತು ಅಧ್ಯಯನ ಮಾಡಲು ಸಮಿತಿ ರಚಿಸಲಾಗಿತ್ತೇ; ರಚಿಸಿದ್ದಲ್ಲಿ ಸಮಿತಿಯು ಸದರಿ ವಿಶ್ವವಿದ್ಯಾಲಯಗಳನ್ನು ಮುಚ್ಚಲು ನೀಡಿರುವ ಶಿಫಾರಸ್ಸು / ಕಾರಣಗಳೇನು; (ಸಂಪೂರ್ಣ ವಿವರ ನೀಡುವುದು) | |
| ಈ) | ವಿಶ್ವವಿದ್ಯಾಲಯ 2000ರ ಕಾಯ್ದೆಯನ್ವಯ ವಿಶ್ವವಿದ್ಯಾಲಯಗಳ ಅವಲೋಕನಗಳನ್ನು ಪ್ರತಿ ಐದು ವರ್ಷಗಳಿಗೊಮ್ಮೆ ಮಾಡುವುದಕ್ಕೆ ಇರುವ ನಿಯಮಗಳೇನು; | ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ 71ರನ್ವಯ ವಿಶ್ವವಿದ್ಯಾಲಯದ ಪುನರಾವಲೋಕನ ಆಯೋಗದ ನೇಮಕ ಮಾಡಬೇಕಾಗಿರುತ್ತದೆ; ನಿಯಮಗಳು ಈ ಕೆಳಕಂಡಂತಿದೆ; |

| | | |
|---|---|---|
| | | (1) ಕುಲಾಧಿಪತಿಯು, ಐದು ವರ್ಷಗಳಿಗೊಮ್ಮೆ, ವಿಶ್ವವಿದ್ಯಾಲಯದ ಕಾರ್ಯನಿರ್ವಹಣೆಯನ್ನು ಪುನರಾವಲೋಕಿಸುವುದಕ್ಕಾಗಿ ಮತ್ತು ಶಿಫಾರಸ್ಸುಗಳನ್ನು ಮಾಡುವುದಕ್ಕಾಗಿ ಒಂದು ಆಯೋಗವನ್ನು ರಚಿಸತಕ್ಕದ್ದು.<br>(2) ಆಯೋಗವು, ಮೂವರಿಗೆ ಕಡಿಮೆಯಿಲ್ಲದ ಪ್ರಸಿದ್ಧ ಶಿಕ್ಷಣ ತಜ್ಞರನ್ನು ಒಳಗೊಂಡಿರತಕ್ಕದ್ದು. ಅದರಲ್ಲಿ ಒಬ್ಬನು, ಕುಲಾಧಿಪತಿಯವರು ರಾಜ್ಯ ಸರ್ಕಾರದೊಂದಿಗೆ ಸಮಾಲೋಚಿಸಿ ನೇಮಿಸಿದ ಅಧ್ಯಕ್ಷರಾಗಿರತಕ್ಕದ್ದು.<br>(3) ಸದಸ್ಯರ ನೇಮಕಾತಿಯ ನಿಬಂಧನೆಗಳು ಮತ್ತು ಷರತ್ತುಗಳು, ಕುಲಾಧಿಪತಿಯವರು ನಿರ್ಧರಿಸಬಹುದಾದಂಥವುಗಳು ಆಗಿರತಕ್ಕದ್ದು.<br>(4) ಆಯೋಗವು, ಅದು ಸೂಕ್ತವೆಂದು ಭಾವಿಸುವಂತ ವಿಚಾರಣೆಯನ್ನು ನಡೆಸಿದ ತರುವಾಯ ಕುಲಾಧಿಪತಿಯವರಿಗೆ ಮತ್ತು ರಾಜ್ಯ ಸರ್ಕಾರಕ್ಕೆ ತನ್ನ ಶಿಫಾರಸ್ಸುಗಳನ್ನು ಮಾಡತಕ್ಕದ್ದು.<br>(5) ಕುಲಾಧಿಪತಿಯವರು, ರಾಜ್ಯ ಸರ್ಕಾರದೊಂದಿಗೆ ಸಮಾಲೋಚಿಸಿ ಶಿಫಾರಸ್ಸಿನ ಮೇಲೆ ತಾನು ಸೂಕ್ತವೆಂದು ಭಾವಿಸುವಂಥ ಕ್ರಮವನ್ನು ಕೈಗೊಳ್ಳಬಹುದು.<br>(6) ರಾಜ್ಯ ಸರ್ಕಾರವು, ಕೈಗೊಂಡ ಕ್ರಮವನ್ನು ವಿವರಿಸುವ ಜ್ಞಾಪನ ಪತ್ರದೊಡನೆ ವರದಿಯ ಒಂದು ಪ್ರತಿಯನ್ನು ರಾಜ್ಯ ವಿಧಾನಮಂಡಲದ ಉಭಯ ಸದನಗಳ ಮುಂದೆ ಮಂಡಿಸತಕ್ಕದ್ದು. |
| ಉ) | ಈ ಕಾಯ್ದೆಯನ್ವಯ ಅವಲೋಕನ ಕಾರ್ಯವು ನಡೆಯುತ್ತಿದೆಯೇ; ನಡೆದಿದ್ದಲ್ಲಿ ಯಾವಾಗ, ಯಾವ ಯಾವ ವಿಶ್ವವಿದ್ಯಾಲಯಗಳ ಅವಲೋಕನವನ್ನು ಮಾಡಲಾಗಿದೆ? | ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ 71ರನ್ವಯ ರಾಜ್ಯ ಸರ್ಕಾರವು ವಿಶ್ವವಿದ್ಯಾಲಯದ ಪುನರಾವಲೋಕನ ಆಯೋಗವನ್ನು ರಚಿಸಲಾಗಿರುತ್ತದೆ. ಸದರಿ ಆಯೋಗವು ವರದಿಯನ್ನು ಸರ್ಕಾರಕ್ಕೆ ವರದಿಯನ್ನು ನೀಡಿದ್ದು, ಸದರಿ ವರದಿಯ ಮೇಲೆ ಕೈಗೊಳ್ಳಬೇಕಾದ ಕ್ರಮದ ಬಗ್ಗೆ ಗೌರವಾನ್ವಿತ ರಾಜ್ಯಪಾಲರ ನಿರ್ದೇಶನ ಕೋರಲಾಗಿದ್ದು, ನಿರ್ದೇಶನವನ್ನು ನಿರೀಕ್ಷಿಸಲಾಗಿದೆ. |

ಸಂಖ್ಯೆ: ಇಡಿ 85 ಯುಎನ್ಇ 2025

(ಡಾ: ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು